ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೦೪

# ಕರ್ನಾಟಕ ವಿಧಾನ ಪರಿಷತ್ತು

## ನೂರ ಇಪ್ಪತ್ತೈದನೇ ಅಧಿವೇಶನ

**ಗುರುವಾರ, ದಿನಾಂಕ: ೨೬ನೇ ಜೂನ್, ೨೦೧೪**

---

**ಸಮೂಹ – IV**

೧. ಮುಖ್ಯಮಂತ್ರಿಗಳು

೨. ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಸಚಿವರು

೩. ಗೃಹ ಸಚಿವರು

೪. ನಗರಾಭಿವೃದ್ಧಿ ಸಚಿವರು

---

### ಲೋಕಾಯುಕ್ತರಿಂದ ಭ್ರಷ್ಟ ಅಧಿಕಾರಗಳ ಮೇಲೆ ದಾಳಿ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೪೬ (೧೭೦) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಕಳೆದ ೫ ವರ್ಷಗಳಲ್ಲಿ ಯಾವ್ಯಾವ ಅಧಿಕಾರಿಗಳ ಮೇಲೆ ಲೋಕಾಯುಕ್ತರ ದಾಳಿ ಮಾಡಲಾಗಿದೆ ;

(ಆ) ಅಂತಹ ಅಧಿಕಾರಿಗಳಿಂದ ಎಷ್ಟೆಷ್ಟು ಅಕ್ರಮ ಆಸ್ತಿಗಳನ್ನು ಸರ್ಕಾರ ಮುಟ್ಟುಗೋಲು ಹಾಕಿಕೊಂಡಿದೆ ;

(ಇ) ಯಾವ ಯಾವ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಜರುಗಿಸಲಾಗಿದೆ ;

ಈ) ಸರ್ಕಾರ ಯಾವ್ಯಾವ ಅಧಿಕಾರಿಗಳ ವಿರುದ್ಧ ಕ್ರಿಮಿನಲ್ ಕೇಸ್ ದಾಖಲು ಮಾಡಲಾಗಿದೆ ;

## ಧಾರ್ಮಿಕ ದತ್ತಿ ಇಲಾಖೆಯ ಶಿಕ್ಷಣ ಸಂಸ್ಥೆಗಳು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೭ (೧೭೮) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಧಾರ್ಮಿಕ ದತ್ತಿ ಇಲಾಖೆಯಲ್ಲಿನ ಶಿಕ್ಷಣ ಸಂಸ್ಥೆಗಳನ್ನು ರಾಜ್ಯ ಶಿಕ್ಷಣ ಇಲಾಖೆಯ ಮೂಲಕ ನಡೆಸುವ ಪ್ರಸ್ತಾಪನೆ ಸರ್ಕಾರದ ಮುಂದಿದೆಯೇ ;

(ಆ) ಇದ್ದರೆ, ಸರ್ಕಾರ ಯಾವ ಅಗತ್ಯ ಕ್ರಮದೊಂದಿಗೆ ನಡೆಸಲು ಆದೇಶ ಹೊರಡಿಸುತ್ತದೆ ? (ವಿವರ ನೀಡುವುದು)

## ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳ

## ದೇವಸ್ಥಾನಗಳಿಗೆ ಸಂಬಂಧಿಸಿದಂತೆ

**ಶ್ರೀ ಸಿದ್ದರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೪೮ (೧೭೪) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ೨ ವರ್ಷಗಳಲ್ಲಿ ಮುಜರಾಯಿ ಇಲಾಖೆಯಿಂದ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಿಗೆ ಎಷ್ಟು ಅನುದಾನವನ್ನು ಒದಗಿಸಲಾಗಿದೆ ; (ವಿವರ ನೀಡುವುದು)

(ಆ) ಇದೇ ಅವಧಿಯಲ್ಲಿ ಸದರಿ ಜಿಲ್ಲೆಗಳಲ್ಲಿ ಎಷ್ಟು ದೇವಸ್ಥಾನಗಳನ್ನು ಮುಜರಾಯಿ ಇಲಾಖೆಗೆ ಸೇರಿಸಿಕೊಳ್ಳಲಾಗಿದೆ ; (ತಾಲ್ಲೂಕುವಾರು ವಿವರ ಒದಗಿಸುವುದು)

(ಇ) ಮೇಲ್ಕಂಡ ಅವಧಿಯಲ್ಲಿ ಎರಡೂ ಜಿಲ್ಲೆಗಳಲ್ಲಿ ಸರ್ಕಾರದ ವತಿಯಿಂದ ದೇವಸ್ಥಾನಗಳನ್ನು ಜೀರ್ಣೋದ್ಧಾರಗೊಳಿಸಲಾಗಿದೆಯೇ ? (ಆಗಿದ್ದಲ್ಲಿ, ವಿವರ ಒದಗಿಸುವುದು)

## ಕತ್ನಳ್ಳಿ ಗ್ರಾಮದ ಪಶು ಚಿಕಿತ್ಸಾಲಯ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೪೯ (೧೫೯) ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬಿಜಾಪುರ ತಾಲ್ಲೂಕಿನ ಪ್ರಸಿದ್ಧ ಕತ್ನಳ್ಳಿ ಗ್ರಾಮದಲ್ಲಿ ಪಶು ಚಿಕಿತ್ಸಾಲಯದ ಬೇಡಿಕೆ ಇದ್ದು ಚಿಕಿತ್ಸಾಲಯ ಸ್ಥಾಪಿಸಲಾಗುವುದೇ ;

(ಆ) ರಾಜ್ಯದಲ್ಲಿ ಪ್ರಸ್ತುತ ಹಾಲು ಉತ್ಪಾದಕ ರೈತರಿಗೆ ಪ್ರತಿ ಲೀಟರ್‌ಗೆ ಪ್ರೋತ್ಸಾಹ ಧನವನ್ನು ನೀಡಲಾಗುತ್ತಿದೆಯೇ ;

(ಇ) ಇದರಿಂದ ೨೦೧೪–೧೫ ರಲ್ಲಿ ವಾರ್ಷಿಕ ಎಷ್ಟು ಅಂದಾಜು ವೆಚ್ಚವನ್ನು ನಿರೀಕ್ಷಿಸಲಾಗಿದೆ ?

## ಕುಡಿಯುವ ನೀರಿನ ದರಗಳು

**ಶ್ರೀಮತಿ ಭಾರತಿ ಶೆಟ್ಟಿ (ವಿಧಾನಸಭೆಯಿಂದ ಚುನಾಯಿತರಾದವರು) –**

೫೦ (೧೫೭) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ಜಲ ಮಂಡಳಿಯು ನಾಗರಿಕರಿಗೆ ಸರಬರಾಜು ಮಾಡುತ್ತಿರುವ ನೀರಿಗೆ ವಿಧಿಸುತ್ತಿರುವ ದರ ಎಷ್ಟು ; ಇದರಲ್ಲಿ ಒಳಚರಂಡಿ ವ್ಯವಸ್ಥೆಗೆ ವಿಧಿಸುತ್ತಿರುವ ದರ ಎಷ್ಟು ;

(ಆ) ಜಲ ಮಂಡಳಿಯು ನೀರಿನ ದರವನ್ನು ಏರಿಕೆ ಮಾಡಲು ನಿರ್ಧರಿಸಿದೆಯೇ ; ದರ ಏರಿಕೆ ಮಾಡಲು ಕಾರಣಗಳೇನು ; ಯಾವ ಪ್ರಮಾಣದಲ್ಲಿ ದರ ಏರಿಕೆ ಮಾಡಲಾಗುವುದು ;

(ಇ) ದರ ಏರಿಕೆ ನಿರ್ಧಾರದ ಬದಲಿಗೆ ಸೋರಿಕೆ ಮತ್ತು ಕಳ್ಳತನ ತಡೆಗಟ್ಟಿ ಆದಾಯವನ್ನು ವೃದ್ಧಿಸಿಕೊಳ್ಳಲು ಸರ್ಕಾರ ಈವರೆಗೆ ಕೈಗೊಂಡಿರುವ ಕ್ರಮಗಳೇನು ;

ಈ) ನಗರದಲ್ಲಿ ಜಲಮಂಡಳಿ ವ್ಯಾಪ್ತಿಯಲ್ಲಿರುವ ಅಕ್ರಮ ನೀರಿನ ಸಂಪರ್ಕಗಳೆಷ್ಟು ; ಈ ಅಕ್ರಮ ಸಂಪರ್ಕವನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಮಹಿಳೆಯರ ಮೇಲಿನ ದೌರ್ಜನ್ಯ ಮತ್ತು ಅತ್ಯಾಚಾರ ಪ್ರಕರಣಗಳು

**ಶ್ರೀ ಅಲ್ಲಮ ಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೧ (೧೮೮) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕಳೆದ ಒಂದು ವರ್ಷದ ಅವಧಿಯಲ್ಲಿ ಎಷ್ಟು ಅತ್ಯಾಚಾರ ಪ್ರಕರಣಗಳು ವರದಿಯಾಗಿವೆ ; ಎಷ್ಟು ಪ್ರಕರಣಗಳಲ್ಲಿ ಆರೋಪಿಗಳನ್ನು ಬಂಧಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಕಳೆದ ಒಂದು ವರ್ಷದಲ್ಲಿ ಸದರಿ ಜಿಲ್ಲೆಗಳಲ್ಲಿ ಮಹಿಳೆಯರ ಮೇಲೆ ನಡೆದಿರುವ ದೌರ್ಜನ್ಯ ಪ್ರಕರಣಗಳು ಎಷ್ಟು ; ಇವುಗಳಲ್ಲಿ ಎಷ್ಟು ಪ್ರಕರಣಗಳಲ್ಲಿ ಆರೋಪಿಗಳನ್ನು ಬಂಧಿಸಲಾಗಿದೆ ;

(ಇ) ಮಹಿಳೆಯರ ಮತ್ತು ಹೆಣ್ಣು ಮಕ್ಕಳ ಸುರಕ್ಷತೆಗಾಗಿ ಸರ್ಕಾರ ಯಾವ ರೀತಿಯ ಕ್ರಮಗಳನ್ನು ಕೈಗೊಂಡಿದೆ ?

## ಮ್ಯಾಕ್ಸಿ ಕ್ಯಾಬ್ ಮತ್ತು ಟೆಂಪೋಗಳಿಗೆ ವಿಧಿಸಿರುವ ನಿರ್ಬಂಧ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೨ (೧೪೨) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮ್ಯಾಕ್ಸಿ ಕ್ಯಾಬ್ ಹಾಗೂ ಟೆಂಪೋಗಳನ್ನು ರಾತ್ರಿ ವೇಳೆ ಮೈಸೂರು ನಗರದ ಒಳಕ್ಕೆ ಪ್ರವೇಶಿಸದಂತೆ ನಿರ್ಬಂಧ ಹೇರಲು ಕಾರಣಗಳೇನು ;

(ಆ) ಈ ಮ್ಯಾಕ್ಸಿ ಕ್ಯಾಬ್ ಮತ್ತು ಟೆಂಪೋಗಳಿಗೆ ಪೋಲೀಸರು ಪರ್ಮಿಟ್/ ಅನುಮತಿ ಇದ್ದರೂ ವಿನಾ ಕಾರಣ ಕಿರುಕುಳ ನೀಡಿ ದಂಡ ವಿಧಿಸುತ್ತಿರುವ ಪ್ರಕರಣಗಳು ನಡೆಯುತ್ತಿದ್ದು ಇದನ್ನು ತಡೆಯಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಇ) ಮೈಸೂರು ನಗರದ ಮಾರ್ಗವಾಗಿ ರಾತ್ರಿ ವೇಳೆ ಇತರ ನಗರಗಳಿಗೆ, ಪಟ್ಟಣಗಳಿಗೆ, ಹಳ್ಳಿಗಳಿಗೆ ಹೋಗುವ ಮ್ಯಾಕ್ಸಿ ಕ್ಯಾಬ್ ಮತ್ತು ಟೆಂಪೋಗಳು ನಿರ್ದಿಷ್ಟ ರಸ್ತೆಯಲ್ಲಿ ಸಂಚರಿಸುವಂತೆ ಮಾತ್ರ ಅನುಮತಿ ನೀಡಲು ಕ್ರಮ ತೆಗೆದುಕೊಳ್ಳಲಾಗುವುದೇ ?

## ಕೈಗಾರಿಕೆಗಳ ಸ್ಥಾಪನೆಗೆ ವಶಪಡಿಸಿಕೊಳ್ಳಲಾದ ಜಮೀನು

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೫೩ (೧೬೨) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ೧೦ ವರ್ಷಗಳಿಂದ ರಾಜ್ಯದಲ್ಲಿ ಕೈಗಾರಿಕೆಗಳ ಸ್ಥಾಪನೆಯ ಉದ್ದೇಶದಿಂದ ರೈತರಿಂದ ಎಷ್ಟು ಎಕರೆ ಜಮೀನನ್ನು ವಶಪಡಿಸಿಕೊಳ್ಳಲಾಗಿದೆ ; (ಜಿಲ್ಲಾವಾರು ವಿವರ ಒದಗಿಸುವುದು)

(ಆ) ವಶಪಡಿಸಿಕೊಂಡ ಭೂಮಿಯಲ್ಲಿ ಎಷ್ಟು ಎಕರೆ ಭೂಮಿಯನ್ನು ಕೈಗಾರಿಕೆಗಳಿಗೆ ನೀಡಲಾಗಿದೆ ; (ವಿವರ ನೀಡುವುದು) ಈ ರೀತಿಯಾಗಿ ಸರಕಾರದಿಂದ ಹಂಚಲಾದ ಭೂಮಿಯಲ್ಲಿ ಎಷ್ಟು ಕೈಗಾರಿಕೆಗಳು ಕಾರ್ಯಾರಂಭ ಮಾಡಿವೆ ; ಇಲ್ಲವಾದಲ್ಲಿ, ಇದುವರೆಗೂ ಕಾರ್ಯಾರಂಭ ಮಾಡದಿರಲು ಕಾರಣವೇನು ;

(ಇ) ಈ ರೀತಿಯಾಗಿ ಯಾವ ಯಾವ ಉದ್ಯಮಗಳಿಗೆ ಭೂಮಿ ನೀಡಲಾಗಿದೆ ; ವಶಪಡಿಸಿಕೊಂಡ ಎಲ್ಲಾ ಜಾಗವನ್ನು ಕೈಗಾರಿಕೆಗಳಿಗೆ ಹಂಚಿಕೆ ಮಾಡಲಾಗಿದೆಯೇ ; ಇಲ್ಲವಾದಲ್ಲಿ, ಉಳಿಕೆ ಜಮೀನಿನ ವಿಸ್ತೀರ್ಣ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

ಈ) ರಾಜ್ಯದಲ್ಲಿ ಕೈಗಾರಿಕೆಗಳ ಸ್ಥಾಪನೆಯ ಉದ್ದೇಶದಿಂದ ರೈತರಿಂದ ವಶಪಡಿಸಿಕೊಳ್ಳಲಾದ ಭೂಮಿಗೆ ಮಾರುಕಟ್ಟೆ ದರ ನೀಡಲಾಗಿದೆಯೇ ; ಇಲ್ಲವಾದಲ್ಲಿ, ಏಕೆ ನೀಡಿಲ್ಲ ; ಒಂದು ಎಕರೆ ಜಾಗಕ್ಕೆ ರೈತರಿಗೆ ನೀಡಿದ ದರ ಮತ್ತು ಕೈಗಾರಿಕೆ ಸ್ಥಾಪಿಸಲು ಕಂಪನಿಗೆ ನೀಡಿದ ದರಗಳೇನು ? (ಜಿಲ್ಲಾವಾರು ವಿವರ ನೀಡುವುದು)

## ಶಿಥಿಲಾವಸ್ಥೆಯಲ್ಲಿರುವ ಹಳೆಯ ಸರ್ಕಾರಿ ಕಟ್ಟಡಗಳು

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು)** –

೩೪ (೧೪೮) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ನಗರದಲ್ಲಿ ೪೦ ವರ್ಷಗಳಿಗಿಂತಲೂ ಹೆಚ್ಚಿನ ಅವಧಿ ಪೂರೈಸಿರುವ ಸರ್ಕಾರಿ ಕಟ್ಟಡಗಳು ಇರುವುದೆಷ್ಟು ಮತ್ತು ಯಾವುವು ; ಕಳೆದ ೩ ವರ್ಷಗಳಲ್ಲಿ ಇವುಗಳ ನಿರ್ವಹಣೆಗಾಗಿ ವಿನಿಯೋಗಿಸಿದ ಹಣವೆಷ್ಟು ; (ಪ್ರತ್ಯೇಕ ಮಾಹಿತಿ ಒದಗಿಸುವುದು)

(ಆ) ಹಲವಾರು ಕಟ್ಟಡಗಳು ಶಿಥಿಲಗೊಂಡು, ಕುಸಿಯುವ ಹಂತ ತಲುಪುತ್ತಿರುವ ಅಂಶವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ, ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳು ಏನು ; (ಮಾಹಿತಿ ನೀಡುವುದು)

(ಇ) ಇತ್ತೀಚೆಗೆ ನಗರದ ಯುಟಿಲಿಟಿ ಕಟ್ಟಡದ ಟೈಲ್ಸ್‌ಗಳು ಉದುರುತ್ತಿರುವ ಹಾಗೂ ಈ ಕಟ್ಟಡದಲ್ಲಿನ ಕಛೇರಿಗಳಿಗೆ ಬರುವವರು ಆತಂಕ ವ್ಯಕ್ತಮಾಡುತ್ತಿರುವ ಅಂಶವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ ? (ಹಾಗಿದ್ದಲ್ಲಿ, ಇದಕ್ಕೆ ಕಾರಣಗಳು ಮತ್ತು ಕೈಗೊಂಡ ಕ್ರಮಗಳ ಬಗ್ಗೆ ಮಾಹಿತಿ ಒದಗಿಸುವುದು)

## ಗುತ್ತಿಗೆ ಆಧಾರದ ಶಾಲಾ ಬೋಧಕರಿಗೆ
## ವೇತನ ವಿಳಂಬ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ ) –**

೫೫ (೧೬೭) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಪ್ರಾಥಮಿಕ, ಮಾಧ್ಯಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ಬೋಧಕರ ಸಂಖ್ಯೆ ಎಷ್ಟು ;

(ಆ) ಇವರುಗಳಿಗೆ ನೀಡುತ್ತಿರುವ ಮಾಸಿಕ ವೇತನವೆಷ್ಟು ; (ವಿವರ ನೀಡುವುದು)

(ಇ) ನಿಯಮಿತವಾಗಿ ವೇತನ ನೀಡಲಾಗುತ್ತಿದೆಯೇ ;

ಈ) ಇಲ್ಲವಾದಲ್ಲಿ, ಎಷ್ಟು ತಿಂಗಳುಗಳಿಂದ ನೀಡಿರುವುದಿಲ್ಲ ; ಬೋಧಕರುಗಳಿಗೆ ನೀಡಬೇಕಾಗಿರುವ ಬಾಕಿ ವೇತನದ ಒಟ್ಟು ಮೊತ್ತವೆಷ್ಟು ?

## ಖಾಲಿಯಿರುವ ವಿವಿಧ ವೃಂದದ ಹುದ್ದೆಗಳು

**ಶ್ರೀ ವೀರಕುಮಾರ್ ಅಪ್ಪಾಸೋ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೫೬ (೧೬೬) ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಳಗಾವಿ ಮಹಾನಗರ ಪಾಲಿಕೆಯಲ್ಲಿ ಪ್ರಸ್ತುತ ಖಾಲಿಯಿರುವ ವಿವಿಧ ವೃಂದದ ಹುದ್ದೆಗಳೆಷ್ಟು ;

(ಆ) ಹಾಲಿ ಖಾಲಿಯಿರುವ ವಿವಿಧ ವೃಂದದ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು ;

(ಇ) ಈ ಹುದ್ದೆಗಳನ್ನು ಭರ್ತಿ ಮಾಡದಿರುವುದರಿಂದ ಪಾಲಿಕೆಯ ಕೆಲಸ ಕಾರ್ಯಗಳು ಕುಂಠಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಈ) ಹಾಗಿದ್ದಲ್ಲಿ, ಈ ಖಾಲಿಯಿರುವ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗುವುದು ?

## ಮೃತ ಪೋಲೀಸ್ ಕುಟುಂಬ ವರ್ಗದವರಿಗೆ ಪರಿಹಾರ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು)** –

೫೭ (೧೬೩) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ತವ್ಯನಿರತ ಪೋಲೀಸರು ಮೃತಪಟ್ಟಲ್ಲಿ ಮೃತರ ಕುಟುಂಬಗಳಿಗೆ ಯಾವ ರೀತಿ ಪರಿಹಾರ ನೀಡಲಾಗುತ್ತಿದೆ ;

(ಆ) ಎಷ್ಟು ದಿವಸಗಳಲ್ಲಿ ಪರಿಹಾರ ಮೊತ್ತ ಪಾವತಿಸಲಾಗುತ್ತದೆ ;

(ಇ) ಮೃತ ಕುಟುಂಬ ವರ್ಗದವರಿಗೆ ಪರಿಹಾರ ನೀಡುವಲ್ಲಿ ವಿಳಂಬವಾದಲ್ಲಿ ಸರ್ಕಾರ ಏನು ಕ್ರಮ ಕೈಗೊಂಡಿದೆ ?

## ಕಾರಾಗೃಹಗಳಲ್ಲಿ ಮೊಬೈಲ್ ಜಾಮರ್ ಅಳವಡಿಕೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)** –

೫೮ (೧೪೯) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿನ ಕಾರಾಗೃಹಗಳಿಂದ ಬೆದರಿಕೆ ಕರೆಗಳು, ಹಫ್ತಾ ವಸೂಲಿ ಹಾಗೂ ಸುಪಾರಿ ನೀಡಲ್ಪಟ್ಟಂತಹ ಎಷ್ಟು ಪ್ರಕರಣಗಳು ದಾಖಲಾಗಿವೆ ; ಇವುಗಳ ಕುರಿತು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ಕಾರಾಗೃಹವಾರು, ಪ್ರಕರಣವಾರು ವಿವರ ನೀಡುವುದು)

(ಆ) ಇಂತಹ ಪ್ರಕರಣಗಳನ್ನು ಹತೋಟಿಗೆ ತರಲು ರಾಜ್ಯದ ಕಾರಾಗೃಹಗಳಲ್ಲಿ ಕಟ್ಟುನಿಟ್ಟಾಗಿ ಮೊಬೈಲ್ ಜಾಮರ್‌ಗಳನ್ನು ಅಳವಡಿಸುವ ಯೋಜನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಯಾವಾಗ ಅಳವಡಿಸಲಾಗುವುದು ; ಇಲ್ಲವಾದಲ್ಲಿ ಕಾರಣವೇನು ?

## ಬಿ.ಬಿ.ಎಂ.ಪಿ.ಗೆ ಸೇರಿದ ಸ್ಥಿರಾಸ್ತಿ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು)** –

೫೯ (೧೬೪) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಸೇರಿದ ಆಸ್ತಿಗಳ (ಕಟ್ಟಡ ಮತ್ತು ನಿವೇಶನಗಳು) ದಾಖಲಾತಿಗಳನ್ನು ಇಡಲಾಗಿದೆಯೇ ;

(ಆ) ಇಟ್ಟಿದ್ದಲ್ಲಿ, ಅಂತಹ ಆಸ್ತಿಗಳ ಒಟ್ಟು ವಿವರಗಳನ್ನು ನೀಡುವುದು ;

(ಇ) ಆ ಆಸ್ತಿಗಳ ಪೈಕಿ ಒತ್ತುವರಿ ಆಗಿರುವ ಆಸ್ತಿಗಳ ಪೂರ್ಣ ವಿವರ ಮತ್ತು ಒತ್ತುವರಿ ಮಾಡಿರುವವರ ಪೂರ್ಣ ವಿವರ ಮಹಾನಗರ ಪಾಲಿಕೆಯಲ್ಲಿ ಲಭ್ಯವಿದೆಯೇ ? (ಸಂಪೂರ್ಣ ಮಾಹಿತಿ ನೀಡುವುದು)

## ಅಕ್ರಮ–ಸಕ್ರಮದ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ ) (ನಾಮನಿರ್ದೇಶನ ಹೊಂದಿದವರು)** –

೬೦ (೧೬೫) ಮುಖ್ಯಮಂತ್ರಿಗಳು ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ನಿವಾಸಿಗಳಿಗೆ ಹೊಸದಾಗಿ ತಂದಿರುವ ಅಕ್ರಮ–ಸಕ್ರಮ ಯೋಜನೆ ಎಂದಿನಿಂದ ಜಾರಿಗೆ ಬಂದಿದೆ ;

(ಆ) ಈ ಯೋಜನೆಯಿಂದ ಎಷ್ಟು ಫಲಾನುಭವಿಗಳು ಅನುಕೂಲ ಪಡೆಯುವರು ;

(ಇ) ಅಕ್ರಮ–ಸಕ್ರಮದ ಪೂರ್ಣವಿವರ ಮಾಹಿತಿ ನೀಡುವುದು ;

ಈ) ಈ ಯೋಜನೆ ಜಾರಿಗೆ ಬರಲು ಅವಧಿ ನಿಗದಿಪಡಿಸಲಾಗಿದೆಯೇ ;

(ಉ) ಇದರಿಂದ ಅಂದಾಜು ಎಷ್ಟು ವರಮಾನ ನಿರೀಕ್ಷಿಸಬಹುದು ?

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಕಾ.ಸೂ. 235 ಪ್ರತಿಗಳು – 1000 – ಪಿ.8